# ಆಯುಕ್ತರು
ಕಾರ್ಮಿಕ ಇಲಾಖೆ

ಕರ್ನಾಟಕ ಸರ್ಕಾರ
ಕಾರ್ಮಿಕ ಇಲಾಖೆ

"ಕಾರ್ಮಿಕ ಭವನ", ಐಟಿಐ ಕಾಲೇಜ್ ಕಾಂಪೌಂಡ್
ಬನ್ನೇರುಘಟ್ಟ ರಸ್ತೆ, ಬೆಂಗಳೂರು – 560 029
ಕಛೇರಿ: 080–2975 3078
ಇಮೇಲ್ : labour.commissioner42@gmail.com


ಸಂಖ್ಯೆ: ಕವೇಕಾ–2/ಇತರೆ–1/ವಿಡಿಎ/ವಿನಾಯಿತಿ/2020–21 ದಿನಾಂಕ: 21–07–2022

**: ಕಛೇರಿ ಆದೇಶ:**

ವಿಷಯ: ದಿನಾಂಕ: 01–04–2020 ರಿಂದ 31–03–2021 ರವರೆಗೆ ಪಾವತಿಸಬೇಕಾಗಿದ್ದ ವ್ಯತ್ಯಸ್ಥ ತುಟ್ಟಿಭತ್ಯೆ (ವಿ.ಡಿ.ಎ)ಯನ್ನು ಮುಂದೂಡಿ ಹೊರಡಿಸಿದ ಸರ್ಕಾರದ ಆದೇಶವನ್ನು ಹಿಂಪಡೆದು ಆದೇಶಿಸಿರುವ ಬಗ್ಗೆ.

ಉಲ್ಲೇಖ: ಸರ್ಕಾರದ ಆದೇಶ ಸಂಖ್ಯೆ: ಕಾಇ 72 ಎಲ್‌ಡಬ್ಲ್ಯೂಎ 2020, ದಿನಾಂಕ: 18–07–2022.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕೋವಿಡ್–19 ತುರ್ತು ಸಂದರ್ಭದ ಹಿನ್ನೆಲೆಯಲ್ಲಿ ಘೋಷಿಸಲಾಗಿದ್ದ ಲಾಕ್‌ಡೌನ್ ಅವಧಿಯಲ್ಲಿ ಉದ್ಯೋಗದಾತರ ಹಿತರಕ್ಷಣೆಯನ್ನು ಪರಿಗಣಿಸಿ ವಿವಿಧ ಕೈಗಾರಿಕೆಗಳು/ ಸಂಸ್ಥೆಗಳಲ್ಲಿ ಕೆಲಸ ಮಾಡುತ್ತಿರುವ ಕಾರ್ಮಿಕರಿಗೆ 2020–21ನೇ ಸಾಲಿನ ವ್ಯತ್ಯಸ್ಥ ತುಟ್ಟಿಭತ್ಯೆ (V.D.A) ಏರಿಕೆಯ ಮೊತ್ತ ಪಾವತಿಸುವುದನ್ನು ಮುಂದೂಡಿ ದಿನಾಂಕ: 20–07–2020 ರಂದು ಸರ್ಕಾರವು ಹೊರಡಿಸಿದ್ದ ಆದೇಶವನ್ನು ಉಲ್ಲೇಖಿತ ಆದೇಶದನ್ವಯ ಹಿಂಪಡೆದಿರುತ್ತದೆ. ಸದರಿ ಆದೇಶದ ಪ್ರತಿಯನ್ನು ಈ ಪತ್ರದೊಂದಿಗೆ ಲಗತ್ತಿಸಿ ಕಳುಹಿಸಲಾಗಿರುತ್ತದೆ. ಈ ಆದೇಶದ ಕುರಿತು ಕೆಳಗೆ ಸೂಚಿಸಿದಂತೆ ಸೂಕ್ತ ಕ್ರಮ ಕೈಗೊಳ್ಳಲು ತಿಳಿಸಿದೆ.

1. ಆದೇಶವನ್ನು ನಿಮ್ಮ ಜಿಲ್ಲೆಯ ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತ್ ಕಾರ್ಯ ನಿರ್ವಹಣಾಧಿಕಾರಿಗಳ ಗಮನಕ್ಕೆ ತರಲು ಕ್ರಮ ಕೈಗೊಳ್ಳುವುದು.
2. ತಮ್ಮ ಕಾರ್ಯವ್ಯಾಪ್ತಿಯ ಕಾರ್ಮಿಕ ಮತ್ತು ಮಾಲೀಕ ಸಂಘಟನೆಗಳು ಹಾಗೂ ಹೊರಗುತ್ತಿಗೆ ನೌಕರರನ್ನು ನೇಮಕ ಮಾಡಿಕೊಂಡಿರುವ ವಿವಿಧ ಇಲಾಖೆಗಳ ಗಮನಕ್ಕೆ ತರುವುದು.
3. ನಿಮ್ಮ ಹಾಗೂ ನಿಮ್ಮ ಅಧೀನದ ಎಲ್ಲಾ ಕಛೇರಿಗಳು ಮತ್ತು ಹೆಚ್ಚು ಸಾರ್ವಜನಿಕರು ಸೇರುವ ಕಂದಾಯ, ಪಂಚಾಯತ್ ಹಾಗೂ ಸ್ಥಳೀಯ ಸಂಸ್ಥೆಗಳ ಕಛೇರಿಗಳು ಹಾಗೂ ಇಲಾಖೆಯ ಎಲ್ಲಾ ಕಛೇರಿಗಳಲ್ಲಿ ಪ್ರದರ್ಶಿಸುವುದು.
4. "ಕಾನೂನು ಅರಿವು" ಕಾರ್ಯಕ್ರಮಗಳಲ್ಲಿ ಸದರಿ ವಿಷಯವನ್ನು ಪ್ರಸ್ತಾಪಿಸಿ ಅರಿವು ಮೂಡಿಸುವುದು ಹಾಗೂ ಸದರಿ ಅವಧಿಯ ವಿ.ಡಿ.ಎ ಪಾವತಿಸದಿದ್ದಲ್ಲಿ ಸಂಬಂಧಿಸಿದ ಕಾರ್ಮಿಕರಿಗೆ ಪಾವತಿಸಲು ನಿಯಮಾನುಸಾರ ಕ್ರಮ ಕೈಗೊಳ್ಳುವುದು.

21/7

(ಅಕ್ರಂ ಪಾಷ ಐ.ಎ.ಎಸ್)
ಆಯುಕ್ತರು
ಕಾರ್ಮಿಕ ಇಲಾಖೆ

**ಇವರಿಗೆ:**

1. ಎಲ್ಲಾ ಕಾರ್ಮಿಕ ಅಧಿಕಾರಿಗಳು– ತಮ್ಮ ಕಾರ್ಯವ್ಯಾಪ್ತಿಯಲ್ಲಿ ಬರುವ ಹಿರಿಯ ಕಾರ್ಮಿಕ ನಿರೀಕ್ಷಕರು ಹಾಗೂ ಕಾರ್ಮಿಕ ನಿರೀಕ್ಷಕರುಗಳಿಗೆ ಪ್ರತಿಗಳನ್ನು ತಲುಪಿಸಿ ಸೂಕ್ತ ಕ್ರಮ ಕೈಗೊಳ್ಳಲು ಸೂಚಿಸುವುದು.
2. ಎಲ್ಲಾ ಸಹಾಯಕ ಕಾರ್ಮಿಕ ಆಯುಕ್ತರು.

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ದಿನಾಂಕ: 01.04.2020 ರಿಂದ 31.03.2021ರವರೆಗೆ ಪಾವತಿಸಬೇಕಾಗಿದ್ದ ವ್ಯತ್ಯಸ್ಥ ತುಟ್ಟಿಭತ್ಯೆ (ವಿ.ಡಿ.ಎ) ಯನ್ನು ಮುಂದೂಡಿ ಹೊರಡಿಸಿದ ಸರ್ಕಾರದ ಆದೇಶವನ್ನು ಹಿಂಪಡೆಯುವ (Withdraw) ಬಗ್ಗೆ.

ಓದಲಾಗಿದೆ: ಸರ್ಕಾರದ ಆದೇಶ ಸಂಖ್ಯೆ: ಕಾಇ 72 ಎಲ್ ಡಬ್ಲ್ಯೂ ಎ 2020 ದಿನಾಂಕ: 20.07.2020.

ಪ್ರಸ್ತಾವನೆ:

ಮೇಲೆ ಓದಲಾದ (1) ರ ಸರ್ಕಾರದ ಆದೇಶದಲ್ಲಿ ಕೋವಿಡ್-19 ತುರ್ತು ಸಂದರ್ಭದ ಹಿನ್ನಲೆಯಲ್ಲಿ ಘೋಷಿಸಲಾಗಿದ್ದ ಲಾಕ್ ಡೌನ್ ಅವಧಿಗೆ ವೇತನವನ್ನು ನೀಡಬೇಕೆಂದು ಕೇಂದ್ರ ಸರ್ಕಾರದ ಮಾರ್ಗಸೂಚಿಗಳಲ್ಲಿ ತಿಳಿಸಿದ್ದು, ತುರ್ತು ಪರಿಸ್ಥಿತಿಯ ಈ ಸಂದರ್ಭದಲ್ಲಿ ಉದ್ಯೋಗದಾತರ ಹಿತ ರಕ್ಷಣೆಯನ್ನು ಪರಿಗಣಿಸಿ, ದಿನಾಂಕ: 01.04.2020 ರಿಂದ 31.03.2021ರವರೆಗೆ ಪಾವತಿಸಬೇಕಾಗಿರುವ ವಿಡಿಎ ಮೊತ್ತವನ್ನು ಮುಂದೂಡಿ ಆದೇಶಿಸಲಾಗಿರುತ್ತದೆ.

ಸರ್ಕಾರದ ಈ ಆದೇಶದ ವಿರುದ್ಧ ಕಾರ್ಮಿಕ ಸಂಘಟನೆಗಳು ಮಾನ್ಯ ಉಚ್ಛ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಂಖ್ಯೆ: 9413/2020 ಪ್ರಕರಣವನ್ನು ದಾಖಲಿಸಿದ್ದು, ಸದರಿ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾನ್ಯ ಉಚ್ಛ ನ್ಯಾಯಾಲಯವು ದಿನಾಂಕ: 11.09.2020ರಂದು ""The impugned order, as observed earlier, ex-facie illegal and deserves to be stayed. Till the final disposal of the petitions, the execution and operation of the order bearing No. LD 72 LWA 2020 dated 20th July 2020 will remain stayed" ಎಂಬುದಾಗಿ ತಡೆಯಾಜ್ಞೆ ನೀಡಿರುತ್ತದೆ.

ಈ ಪ್ರಕರಣದಲ್ಲಿ ದಿನಾಂಕ: 23.07.2021ರಂದು ನಡೆದ ವಿಚಾರಣೆಯಲ್ಲಿ, "If the State Government wants to withdraw the impugned order, obviously they do not require the leave of the Court. However, as the impugned order has been stayed by this Court, propriety requires that the State Government should seek the leave of the Court before

implementing the decision of modifying the same" ಎಂದು ತಿಳಿಸುತ್ತಾ, ಈ ಬಗ್ಗೆ ಸರ್ಕಾರದ ಹಂತದಲ್ಲಿ ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳುವಂತೆ ನಿರ್ದೇಶನವಿರುತ್ತದೆ.

ಈ ಎಲ್ಲಾ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕಾಇ 72 ಎಲ್ ಡಬ್ಲ್ಯೂ ಎ 2020**

**ಬೆಂಗಳೂರು, ದಿನಾಂಕ: 18.07.2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರದ ಆದೇಶ ಸಂಖ್ಯೆ: ಕಾಇ 72 ಎಲ್ ಡಬ್ಲ್ಯೂ ಎ 2020 ದಿನಾಂಕ: 20.07.2020ನ್ನು ಹಿಂಪಡೆಯ (Withdraw)ಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

A Umadevi 18/7/2022
(ಎ. ಉಮಾದೇವಿ)
ಪೀಠಾಧಿಕಾರಿ-2
ಕಾರ್ಮಿಕ ಇಲಾಖೆ (ಕನಿಷ್ಠ ವೇತನ)

ಇವರಿಗೆ:

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು ಈ ಅಧಿಸೂಚನೆಯನ್ನು ಇ-ರಾಜ್ಯಪತ್ರ (E-Gazette) ದಲ್ಲಿ ಪ್ರಕಟಿಸಲು ಕೋರಲಾಗಿದೆ.

1. ಕಾರ್ಮಿಕ ಆಯುಕ್ತರು, ಕಾರ್ಮಿಕ ಭವನ, ಬನ್ನೇರುಘಟ್ಟ ರಸ್ತೆ, ಬೆಂಗಳೂರು-29.
2. ಸಂಬಂಧಪಟ್ಟ ಉದ್ಯೋಗದಾತರುಗಳು ಹಾಗೂ ಕಾರ್ಮಿಕ ವರ್ಗದ ಪ್ರತಿನಿಧಿಗಳು (ಕಾರ್ಮಿಕ ಆಯುಕ್ತರ ಮೂಲಕ)
3. ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ (ಕಾರ್ಮಿಕ ಆಯುಕ್ತರ ಮೂಲಕ)
4. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಗಳ ಮುಖ್ಯಕಾರ್ಯ ನಿರ್ವಹಣಾಧಿಕಾರಿಗಳು (ಕಾರ್ಮಿಕ ಆಯುಕ್ತರ ಮೂಲಕ)
5. ಸದಸ್ಯ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಕನಿಷ್ಠ ವೇತನ ಸಲಹಾ ಮಂಡಳಿ, ಕಾರ್ಮಿಕ ಭವನ, ಬೆಂಗಳೂರು.
6. ಎಲ್ಲಾ ಜಿಲ್ಲೆಗಳ ಕಾರ್ಮಿಕ ಅಧಿಕಾರಿಗಳಿಗೆ (ಕಾರ್ಮಿಕ ಆಯುಕ್ತರ ಮೂಲಕ)

ಪ್ರತಿಯನ್ನು ಮಾಹಿತಿಗಾಗಿ:

1. ಮಾನ್ಯ ಕಾರ್ಮಿಕ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
2. ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆ, ವಿಕಾಸಸೌಧ, ಬೆಂಗಳೂರು.
4. ಸರ್ಕಾರದ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಕಾರ್ಮಿಕ ಇಲಾಖೆ.